## ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಸಂ.ನ/2021-22

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ: 23-02-2022

### ಅಧಿಸೂಚನೆ

**ವಿಷಯ : 2021-22ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.**

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಇಡಿ 227 ಯುಎನ್ಇ 2021 ದಿನಾಂಕ:16-09-2021
2. ಕುಲಪತಿಯವರ ಅನುಮೋದನೆ ದಿನಾಂಕ: 22-02-2022

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು, 2021-22ನೇ ಸಾಲಿಗೆ ಬೆಂಗಳೂರಿನ **ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್,** ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 200 (ಇನ್ನೂರು) |
| ಬಿ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |

ನೂತನ ರಾಷ್ಟ್ರೀಯ ಶಿಕ್ಷಣ ನೀತಿ-2020ರನುಸಾರ ರಚಿಸಲ್ಪಟ್ಟ ಕರಡು ವಿನಿಯಮಗಳ ಅನ್ವಯ ಮತ್ತು ಉಲ್ಲೇಖ(1)ರ ಸರ್ಕಾರದ ಆದೇಶದಂತೆ, 2021-22ನೇ ಶೈಕ್ಷಣಿಕ ಸಾಲಿಗೆ ಸೀಮಿತವಾಗಿ ಪ್ರಸ್ತುತ ಸ್ನಾತಕ ಪದವಿ ಕೋರ್ಸು/ಕಾಂಬಿನೇಷನ್‌ವಾರು ಅನುಮೋದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ (Intake) ಹೆಚ್ಚುವರಿಯಾಗಿ 20% ವಿದ್ಯಾರ್ಥಿಗಳನ್ನು ಅನುಮೋದಿಸಲು ಸದರಿ ಆದೇಶದಲ್ಲಿ ನಿಗದಿಪಡಿಸಲಾಗಿರುವ ಷರತ್ತಿಗೊಳಪಟ್ಟು ಅನುಮತಿಸಲಾಗಿರುತ್ತದೆ. Open electiveಗೆ ಸಂಬಂಧಪಟ್ಟ ಹಾಗೆ, ಪ್ರತಿ ಸಂಯೋಜಿತ ಕಾಲೇಜಿನ, ಒಟ್ಟು ಅನುಮೋದಿತ ಕೋರ್ಸ್-ಕಾಂಬಿನೇಷನ್‌ಗಳಲ್ಲಿನ ಪ್ರತಿ ವಿಷಯದ ವಿದ್ಯಾರ್ಥಿ ಪ್ರಮಾಣ (Intake) ಪ್ರಸ್ತುತ ಅನುಮೋದಿತ ವಿದ್ಯಾರ್ಥಿ ಪ್ರಮಾಣದ 50% ಮೀರದಂತೆ ಕ್ರಮ ವಹಿಸುವುದು. Open elective ಗೆ ಸಂಬಂಧಪಟ್ಟ ಹಾಗೆ ಮೇಲೆ ತಿಳಿಸಲಾದ ಪ್ರತಿ ವಿಷಯದ ಶೇಕಡವಾರು ವಿದ್ಯಾರ್ಥಿ ಪ್ರಮಾಣವನ್ನು ವಿಶ್ವವಿದ್ಯಾಲಯವು ಆವಶ್ಯಕತೆ ಅನುಗುಣವಾಗಿ ಮಾರ್ಪಡಿಸಿಕೊಳ್ಳಬಹುದಾಗಿದೆ.

**ವಿ.ಸೂ:** *2021-22ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟು ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.*

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. *ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021 ದಿನಾಂಕ: 12-02-2021ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಎರಡು ವರ್ಷಗಳ ಒಳಗಾಗಿ ಸ್ಥಳೀಯ ವಿಚಾರಣ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು* ***Defined Parameters*** *ಗಳನ್ನು ಪೂರೈಸಲು ಕ್ರಮವಹಿಸತಕ್ಕದ್ದು.*
3. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
4. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
5. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
6. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು,

ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

7. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
8. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.
9. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
10. ವಿದ್ಯಾರ್ಥಿಗಳು ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.
11. ಕಾಲೇಜು ವಿದ್ಯಾರ್ಥಿಗಳ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಇತರೇ ದಾಖಲೆಗಳನ್ನು ಮೂರು ತಿಂಗಳ ಅವದಿಯೊಳಗೆ ವಿದ್ಯಾರ್ಥಿಗಳಿಗೆ ನೀಡಬೇಕು. ಅವಧಿ ಮೀರಿದ ನಂತರ ತಮ್ಮಲ್ಲಿಯೇ ಉಳಿದುಕೊಂಡಿರುವ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತಗಳ ಬಗ್ಗೆ ಕುಲಸಚಿವರು (ಮೌಲ್ಯಮಾಪನ) ಇವರಿಗೆ ವರದಿ ನೀಡತಕ್ಕದ್ದು.
12. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.
13. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
14. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.
15. 2022-23ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
16. ***ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್(NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.***
17. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆಜ್ಞೆ ಮೇರೆಗೆ

ಕುಲಸಚಿವರು

ಗೆ,

**ಪ್ರಾಂಶುಪಾಲರು,**
**ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್,**
**ನಂ.40/5, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು-560 082.**

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56/
4) ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4. ಬೆಂ. ವಿ. ಬೆಂಗಳೂರು-56
5) ಅಧೀಕ್ಷಕರು, ಕಾನ್ಫಿಡೆನ್ಷಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು-56
6) ಐ.ಟಿ. ಕೋಆರ್ಡಿನೇಟರ್, ಯು.ಯು.ಸಿ.ಎಂ.ಎಸ್., ಬೆಂ.ವಿ.ವಿ, ಬೆಂಗಳೂರು-56.
7) ಸಹಾಯಕ ನಿರ್ದೇಶಕರು, ಅಂಕಿ ಅಂಶಗಳ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-1 [Aca-III:-1-2021-22]